ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಅರಣ್ಯ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ     ದಿನಾಂಕ : DATE : 26/2/2021

### ಅರಣ್ಯ ಪ್ರದೇಶವಿರುವ ವಿಧಾನಸಭಾ ಕ್ಷೇತ್ರದ ಶಾಸಕರ ಸಭೆಯಲ್ಲಿ ಸಚಿವ ಅರವಿಂದ ಲಿಂಬಾವಳಿ ಸ್ಪಷ್ಟನೆ

# ಆನೆ ಕಾರಿಡಾರ್‌ಗಾಗಿ ಕೇಂದ್ರಕ್ಕೆ ನಿಯೋಗ

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಕರ್ನಾಟಕದಲ್ಲಿ ಪ್ರಾಣಿ ಅತಿಕ್ರಮಣ ಮಾಡುವ ಮಾರ್ಗದ ಉದ್ದಕ್ಕೂ ಬ್ಯಾರಿಕೇಡ್ ನಿರ್ಮಾಣ ಮಾಡುವ ಯೋಜನೆ ಅನುಷ್ಠಾನಕ್ಕೆ ಕೇಂದ್ರದ ಅನುಮತಿ ಅಗತ್ಯವಿದ್ದು, ಶೀಘ್ರದಲ್ಲೇ ಅರಣ್ಯ ವ್ಯಾಪ್ತಿಯ ವಿಧಾನಸಭಾ ಕ್ಷೇತ್ರದ ಶಾಸಕರ ನಿಯೋಗವನ್ನು ಕೇಂದ್ರಕ್ಕೆ ಕೊಂಡೊಯ್ಯಲಾಗುವುದು ಎಂದು ಅರಣ್ಯ, ಕನ್ನಡ ಮತ್ತು ಸಂಸ್ಕೃತಿ ಸಚಿವ ಅರವಿಂದ ಲಿಂಬಾವಳಿ ಹೇಳಿದ್ದಾರೆ.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಅರಣ್ಯ ಪ್ರದೇಶವಿರುವ ವಿಧಾನಸಭಾ ಕ್ಷೇತ್ರದ ಶಾಸಕರ ಸಭೆಯಲ್ಲಿ ಮಾತನಾಡಿದರು. ಕರ್ನಾಟಕದ 624 ಕಿ.ಮೀ ಮಾರ್ಗಕ್ಕೆ ಬ್ಯಾರಿಕೇಡ್ ನಿರ್ಮಾಣ ಮಾಡುವ ಯೋಜನೆ ಅನುಷ್ಠಾನಗೊಳಿಸುತ್ತಿದ್ದು, ಇದುವರೆಗೆ 165 ಕಿ.ಮೀ ಬೇಲಿ ಹಾಕುವ ಕೆಲಸ ಮುಗಿದಿದೆ. ಇನ್ನೂ 450 ಕಿ.ಮೀ ಮಾರ್ಗಕ್ಕೆ ಬ್ಯಾರಿಕೇಡ್ ನಿರ್ಮಿಸುವ ಕೆಲಸ ಬಾಕಿ ಇದ್ದು, ಇದಕ್ಕೆ 550 ಕೋಟಿ ರು. ಅಗತ್ಯವಿದೆ. ಈ ಯೋಜನೆಗೆ ಕೇಂದ್ರದ ಅನುಮತಿ ಬೇಕಿದ್ದು, ಶೀಘ್ರದಲ್ಲೇ ಅರಣ್ಯ ಪ್ರದೇಶದ ವಿಧಾನಸಭಾ ಕ್ಷೇತ್ರದ ಶಾಸಕರ ನಿಯೋಗದೊಂದಿಗೆ ದೆಹಲಿಗೆ ಹೋಗಿ ಸಂಬಂಧಿಸಿದ ಇಲಾಖಾ ಸಚಿವರಿಗೆ ಮನವಿ ಸಲ್ಲಿಸಲಾಗುವುದು ಎಂದು ಹೇಳಿದರು.

**ಜನಪರ ಇಲಾಖೆ ಮಾಡಲು ಕ್ರಮ:** ಅರಣ್ಯ ಇಲಾಖೆ ಅಧಿಕಾರಿಗಳಿಂದ ನಾನಾ ಕಾರಣಗಳಿಗಾಗಿ ಜನರಿಗೆ ತೊಂದರೆಯಾಗುತ್ತಿದೆ ಎಂಬ ಆರೋಪ ಕೇಳಿ ಬಂದಿದೆ. ಮುಖ್ಯವಾಗಿ ಅರಣ್ಯ ವಾಸಿಗಳಿಗೆ ಮೂಲ ಸೌಕರ್ಯ ಕಲ್ಪಿಸುವ ಮತ್ತು ಅವರಿಗೆ ಹಕ್ಕುಪತ್ರ ಕೊಡುವ ಕೆಲಸಗಳು ನನೆಗುದಿಗೆ ಬಿದ್ದಿವೆ. ಇಂತಹ ಸಂಗತಿಗಳ ಬಗ್ಗೆ ಇಲಾಖೆ ಶೀಘ್ರ ಕ್ರಮ ಕೈಗೊಂಡು ಅವರಿಗೆ ನೆರವಾಗುವಂತೆ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದ್ದೇನೆ. ಅರಣ್ಯ ಇಲಾಖೆ ಜನಪರ ಇಲಾಖೆಯಾಗಿ, ಜನಸ್ನೇಹಿಯಾಗಿ ಪರಿವರ್ತನೆ ಮಾಡುವ ನಿಟ್ಟಿನಲ್ಲಿ ಅಗತ್ಯವಿರುವ ಕ್ರಮಗಳನ್ನು ಕೈಗೊಳ್ಳುತ್ತೇನೆ ಎಂದು ಸಚಿವ ಅರವಿಂದ ಲಿಂಬಾವಳಿ ತಿಳಿಸಿದರು.

**ಶೀಘ್ರ ಪರಿಹಾರಕ್ಕೆ ಮನವಿ:** ಸಭೆಯಲ್ಲಿ ಭಾಗವಹಿಸಿದ್ದ ಶಾಸಕರು ಪ್ರಾಣಿಗಳ ಹಾವಳಿಯಿಂದ ಸಾವಿಗೀಡಾದವರಿಗೆ ನೀಡಬೇಕಾದ ಪರಿಹಾರ ಶೀಘ್ರ ದೊರೆಯುವಂತಾಗಬೇಕು. ಬೆಳೆಹಾನಿ ಪರಿಹಾರ ಮೊತ್ತ ಹೆಚ್ಚಿಸಬೇಕು, ಪಶು ಮರಣಕ್ಕೆ ಮತ್ತು ಇತರ ಸಣ್ಣ ಪ್ರಾಣಿಗಳ ಮರಣಕ್ಕೆ ಕೊಡಲಾಗುತ್ತಿರುವ ಪರಿಹಾರ ತುಂಬ ಕಡಿಮೆ ಇದೆ. ಅದು ಈಗಿನ ಮಾರುಕಟ್ಟೆ ದರಕ್ಕೆ ಅನುಗುಣವಾಗಿ ನಿಗದಿಯಾಗಬೇಕು ಎಂದು ಮನವಿ ಮಾಡಿದರು. ಹಾಡಿ ಮತ್ತು ಅರಣ್ಯದೊಳಗಿನ ಸಂಪರ್ಕ ರಸ್ತೆ ಅಭಿವೃದ್ಧಿಪಡಿಸಬೇಕು ಎಂಬ ಬೇಡಿಕೆಗಳ ಬಗ್ಗೆ ಗಮನ ಸೆಳೆದರು. ಈ ಬಗ್ಗೆ ಸಕಾರಾತ್ಮಕವಾಗಿ ಪ್ರತಿಕ್ರಿಯಿಸಿದ ಸಚಿವರು, ಈ ಬಗ್ಗೆ ಉನ್ನತಾಧಿಕಾರಿಗಳ ಜತೆ ಚರ್ಚಿಸಿ ಕ್ರಮಕೈಗೊಳ್ಳುತ್ತೇನೆ. ಇಲಾಖೆಯ ಕೆಳಹಂತದ ಅಧಿಕಾರಿಗಳಿಂದ ಆಗುತ್ತಿರುವ ತೊಂದರೆ ಗಳ ನಿವಾರಣೆಗೆ ಜಿಲ್ಲಾವಾರು ಅರಣ್ಯ ಅಧಿಕಾರಿಗಳಿಗೆ ಅಹವಾಲು ವಿಲೇವಾರಿ ಮಾಡುವ ಬಗ್ಗೆ ಕಾರ್ಯಾಗಾರ ನಡೆಸಿ, ಸೂಚನೆ ನೀಡಲಾಗುತ್ತದೆ ಎಂದು ಹೇಳಿದರು.



ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಅರಣ್ಯ ಪ್ರದೇಶವಿರುವ ವಿಧಾನಸಭಾ ಕ್ಷೇತ್ರದ ಶಾಸಕರ ಸಭೆಯಲ್ಲಿ ಸಚಿವ ಅರವಿಂದ ಲಿಂಬಾವಳಿ, ಸ್ಪೀಕರ್ ಕಾಗೇರಿ ಹಾಗೂ ಇತರ ಶಾಸಕರು ಇದ್ದರು.

- ಇದುವರೆಗೆ 165 ಕಿ.ಮೀ ಬೇಲಿ ಹಾಕುವ ಕೆಲಸ ಪೂರ್ಣ
- ಯೋಜನೆಗೆ ಕೇಂದ್ರದ ಅನುಮತಿ ಬೇಕಿದ್ದು, ಸಂಬಂಧಿಸಿದ ಇಲಾಖಾ ಸಚಿವರಿಗೆ ಮನವಿ
- ಕರ್ನಾಟಕದ 624 ಕಿ.ಮೀ ಮಾರ್ಗಕ್ಕೆ ಬ್ಯಾರಿಕೇಡ್ ನಿರ್ಮಾಣ ಮಾಡುವ ಯೋಜನೆ ಅನುಷ್ಠಾನಗೊಳಿಸುತ್ತಿದೆ
- ಇನ್ನೂ 450 ಕಿ.ಮೀ ಮಾರ್ಗಕ್ಕೆ ಬ್ಯಾರಿಕೇಡ್ ನಿರ್ಮಿಸುವ ಕೆಲಸ ಬಾಕಿಯಿದ್ದು, 550 ಕೋಟಿ ರು. ಅಗತ್ಯ
- ಅರಣ್ಯ ಇಲಾಖೆ ಜನಪರ ಇಲಾಖೆಯಾಗಿ, ಜನಸ್ನೇಹಿಯಾಗಿ ಪರಿವರ್ತನೆ ಮಾಡುವ ನಿಟ್ಟಿನಲ್ಲಿ ಅಗತ್ಯವಿರುವ ಕ್ರಮ

## ಸ್ಪೀಕರ್ ಕಾಗೇರಿ ಸೇರಿ ಪ್ರಮುಖರು ಹಾಜರು

ಸಭೆಯಲ್ಲಿ ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ, ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವ ಎಸ್.ಅಂಗಾರ, ಕಾರ್ಮಿಕ ಸಚಿವ ಶಿವರಾಂ ಹೆಬ್ಬಾರ್, ಶಾಸಕರಾದ ಕೆ.ಜಿ.ಬೋಪಯ್ಯ, ಅಪ್ಪಚು ರಂಜನ್, ಎಚ್.ಕೆ.ಕುಮಾರಸ್ವಾಮಿ, ಅರಗ ಜ್ಞಾನೇಂದ್ರ, ವಿ.ಸುನಿಲ್ ಕುಮಾರ್, ಟಿ.ಡಿ.ರಾಜೇಗೌಡ, ಆರ್.ವಿ.ದೇಶಪಾಂಡೆ, ಎನ್.ಮಹೇಶ್, ಸುನಿಲ್ ಬಿ.ನಾಯ್ಕ್ ಹಾಗೂ ರೂಪಾಲಿ ಸಂತೋಷ್ ನಾಯ್ಕ್, ಹರ್ಷ, ಎಂ.ರೂಪಕಲಾ ಭಾಗವಹಿಸಿದ್ದರು.